ಓ ಎಸ್ ನಂಃ 14/2020
ಪಿ ಡಬ್ಲ್ಯೂ ಃ 1

ದಿಃ 19.04.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಎ ಎಸ್ ಎಸ್ ವಕೀಲರಿಂದ :-**

7 ನೇ ಪ್ರತಿವಾದಿಯು ಈ ದಾವೆಯಲ್ಲಿ ಸಲ್ಲಿಸಿರುವ ಪ್ರತಿವಾದ ಪತ್ರವನ್ನು ನಾನು ಓದಿ ತಿಳಿದುಕೊಂಡಿರುವುದಿಲ್ಲ. ಈ ದಾವೆಯನ್ನು ಹೂಡುವುದಕ್ಕಿಂತ ಮುಂಚೆ ದಾವಾ ಸ್ವತ್ತುಗಳ ವಿಚಾರವಾಗಿ ಗ್ರಾಮದಲ್ಲಿ ಪಂಚಾಯತಿ ನಡೆದಿದೆ ಎಂದರೆ ಸರಿಯಲ್ಲ. ಸದರಿ ವಿಚಾರ ತಮಗೆ ಗೊತ್ತಿದ್ದರೂ ಸಹ ತಾವು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರ ಎಂದರೆ ಸರಿಯಲ್ಲ. 10 ವರ್ಷಗಳ ಹಿಂದೆ ಹೆಣ್ಣು ಮಕ್ಕಳೆಲ್ಲರೂ ದಾವಾ ಆಸ್ತಿಗಳಲ್ಲಿ ತಾವು ತಮ್ಮ ಹಿಸ್ಸಾ ಬಾಬ್ತು ತಲಾ ರೂ. 5 ಲಕ್ಷ ಹಣವನ್ನು 3 ನೇ ಪ್ರತಿವಾದಿಯ ಗಂಡ ಹಾಗೂ 7 ಮತ್ತು 8 ನೇ ಪ್ರತಿವಾದಿಗಳ ಕಡೆಯಿಂದ ಪಡೆದುಕೊಂಡಿದ್ದೀರಿ ಎಂದರೆ ಸರಿಯಲ್ಲ. ತಾವು ಮೇಲ್ಕಂಡ ಪ್ರತಿವಾದಿಗಳಿಂದ ಹಣವನ್ನು ಪಡೆದುಕೊಂಡ ನಂತರ ಪ್ರತಿವಾದಿಗಳು ದಾವಾ ಸ್ವತ್ತುಗಳನ್ನು ಅಭಿವೃದ್ಧಿಪಡಿಸಿದ್ದಾರೆ ಎಂದರೆ ಸರಿಯಲ್ಲ. 30 ವರ್ಷಗಳ ಹಿಂದೆ ನಾವು ಮತ್ತು ಪ್ರತಿವಾದಿಗಳು ಅಭಿವೃದ್ಧಿಪಡಿಸಿದ್ದೇವೆ. ಈ ಎಲ್ಲಾ ವಿಚಾರಗಳು ತಾವು ಹೇಳುತ್ತಿರುವುದು ಸುಳ್ಳು ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳ ಮಾರುಕಟ್ಟೆ ಬೆಲೆಗಳು ಹೆಚ್ಚಾಗಿರುವ ಕಾರಣ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ತಾವು ಈ ಸುಳ್ಳು ದಾವೆಯನ್ನು ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಬೇರೆ ವಿಚಾರ ನನಗೆ ಗೊತ್ತಿಲ್ಲ.

**ಮುಂದುವರೆದ ಪಾಟೀ ಸವಾಲು ಃ 1 ಮತ್ತು 2 ನೇ ಪ್ರತಿವಾದಿಗಳ ವಕೀಲರು ಗೈರುಹಾಜರಾಗಿದ್ದು ಪಾಟೀ ಸವಾಲನ್ನು ಮುಂದೂಡಲು ಸೂಕ್ತ ಕಾರಣಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆ ಇಲ್ಲ.**

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ಮಾಗಡಿ.